ಬಸವನಬಾಗೇವಾಡಿ ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸುವುದು

769(1223) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಆ) ಈ ನ್ಯಾಯಾಲಯದಲ್ಲಿ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಅ) ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇರುವುದಿಲ್ಲ. ಆದರೂ ಇಲ್ಲಿ ಸಿವಿಲ್ ಜಡ್ಜ್ (ಹಿ.ವಿ) ನ್ಯಾಯಾಲಯವನ್ನು ಸ್ಥಾಪಿಸಲು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಸಿವಿಲ್ ಜಡ್ಜ್ (ಹಿ.ವಿ) ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದಲ್ಲಿ 38 ಜನ ಕೆಲಸ ಮಾಡುತ್ತಿದ್ದಾರೆ. ಈಗ ಸಿವಿಲ್ ಜಡ್ಜ್ (ಹಿ.ವಿ) ನ್ಯಾಯಾಲಯವನ್ನು ಸ್ಥಾಪಿಸಲು ಉದ್ದೇಶಿಸಿರುವ ನ್ಯಾಯಾಲಯಕ್ಕೆ 43 ಜನ ಸಿಬ್ಬಂದಿ ಇರುತ್ತಾರೆ.

ಬಸವನಬಾಗೇವಾಡಿ ಪಟ್ಟಣಕ್ಕೆ ಕುಡಿಯುವ ನೀರು

770(1224) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ಪಟ್ಟಣದಲ್ಲಿ ಕುಡಿಯುವ ನೀರಿನ ತೊಂದರೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?

ಇ) ಇದಕ್ಕಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಈ) ಕಾಮಗಾರಿ ಪ್ರಾರಂಭಗೊಂಡಿದೆಯೇ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು)

ಅ) ಬಂದಿದೆ.

ಆ) ಬಸವನಬಾಗೇವಾಡಿ ಪಟ್ಟಣ ನೀರು ಸರಬರಾಜು ಯೋಜನೆಯನ್ನು ಮಾರ್ಚ್ 2003ರೊಳಗೆ ಚಾಲನೆ ಮಾಡಲಾಗುವುದು.

ಇ) ರೂ. 1150.00 ಲಕ್ಷಗಳು ಬಿಡುಗಡೆಯಾಗಿದ್ದು, ಫೆಬ್ರವರಿ 2003ರ ವರೆಗೆ ಜಲಮಂಡಲಿಯಿಂದ ರೂ. 1275.00 ಲಕ್ಷಗಳು ವೆಚ್ಚ ಮಾಡಲಾಗಿದೆ.

ಈ) ಈ ಯೋಜನೆಯನ್ನು ಫೆಬ್ರವರಿ 1999ರಲ್ಲಿ ಪ್ರಾರಂಭಿಸಲಾಗಿದ್ದು, ಮಾರ್ಚ್ 2003ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

ಟಿ. ನರಸೀಪುರದಲ್ಲಿ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ

771(775) ಡಾ।। ಭಾರತಿ ಶಂಕರ್ (ಟಿ. ನರಸೀಪುರ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಟಿ. ನರಸೀಪುರದಲ್ಲಿ ರಸ್ತೆ ಸಾರಿಗೆ ಬಸ್ ನಿಲ್ದಾಣ ನಿರ್ಮಿಸಲು ಸರ್ಕಾರದವರಿಗೆ ಪ್ರಸ್ತಾಪ ಬಂದಿದೆಯೆ;